ಕಛೇರಿ : +91 80 2335 4039
+91 80 2335 4085
ಇ-ಮೇಲ್ : com-hfws@karnataka.gov.in

# ಆಯುಕ್ತಾಲಯ
## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು

**PD/IDSP/Amoebic Meningoencephalitis/14/2025-26 (E-1963954)** **Date: 18.11.2025**

**ಸಾರ್ವಜನಿಕ ಮಾಹಿತಿ**

**ಶಬರಿಮಲೈ ಯಾತ್ರಿಕರಿಗೆ ಮಿದುಳು ತಿನ್ನುವ ಅಮೀಬಾ (ನೇಗ್ಲೇರಿಯಾ ಫೌಲೇರಿ) ಕುರಿತು ಮುನ್ನೆಚ್ಚರಿಕೆವಹಿಸಲು ಸುರಕ್ಷತಾ ಸಲಹಾ ಮಾರ್ಗಸೂಚಿ**

ಕೇರಳ ರಾಜ್ಯದಲ್ಲಿ ನೇಗ್ಲೇರಿಯಾ ಫೌಲೇರಿ (Naegleria fowleri) ಇಂದ ಉಂಟಾಗುವ ಅಮೀಬಿಕ್ ಮೆನಿಂಗೊಎನ್ಸೆಫಲೈಟಿಸ್ (Amoebic meningoencephalitis) ಪ್ರಕರಣಗಳು ಕಂಡುಬಂದಿರುವ ಹಿನ್ನೆಲೆಯಲ್ಲಿ ರಾಜ್ಯದ ಶಬರಿಮಲೆ ಯಾತ್ರಿಕರಿಗೆ ತಮ್ಮ ಆರೋಗ್ಯದ ಬಗ್ಗೆ ಜಾಗರೂಕರಾಗಿರಲು ಮತ್ತು ಸೋಂಕು ತಡೆಯಲು ಅಗತ್ಯ ಮುನ್ನೆಚ್ಚರಿಕೆ/ ಸುರಕ್ಷಿತಾ ಕ್ರಮಗಳನ್ನು ಪಾಲಿಸುವ ಕುರಿತು ಸಲಹೆಗಳನ್ನು ಕೆಳಕಂಡಂತೆ ನೀಡಲಾಗಿದೆ.

1. ನೇಗ್ಲೇರಿಯಾ ಫೌಲೇರಿ (*Naegleria fowleri*) ಎಂಬುದು ಒಂದು ಸ್ವತಂತ್ರವಾಗಿ ಬದುಕುವ ಅಮೀಬಾ ಆಗಿದ್ದು, ಇದು ಮುಖ್ಯವಾಗಿ ಬೆಚ್ಚಗಿನ ಸಿಹಿನೀರು ಹಾಗೂ ಮಣ್ಣಿನಲ್ಲಿ ಕಂಡುಬರುತ್ತದೆ.
   ಉದಾಹರಣೆಗೆ ನಿಂತ ನೀರು, ಕೊಳ/ಈಜು ಕೊಳಗಳು ಹಾಗೂ ಕೆರೆ.
2. ಈ ಸೋಂಕು ವ್ಯಕ್ತಿಯಿಂದ ವ್ಯಕ್ತಿಗೆ ಅಥವಾ ಕಲುಷಿತಗೊಂಡ ನೀರನ್ನು ಕುಡಿಯುವುದರಿಂದ ಹರಡುವುದಿಲ್ಲ
3. ನೇಗ್ಲೇರಿಯಾ ಫೌಲೇರಿ (Naegleria fowleri) ಅತ್ಯಂತ ವಿಷಕಾರಿ (virulent) ಸೂಕ್ಷ್ಮಜೀವಿಯಾಗಿದ್ದು, ನೀರಿನಿಂದ ಮೂಗಿಗೆ ಪ್ರವೇಶಿಸಿದಾಗ ಅದು ಮೆದುಳನ್ನು ತಲುಪಿ, ಅಮೀಬಿಕ್ ಮೆನಿಂಗೊಎನ್ಸೆಫಲೈಟಿಸ್ (Amoebic meningoencephalitis) ಎನ್ನುವ ಅಪರೂಪದ ಗಂಭೀರ/ ಮಾರಣಾಂತಿಕ ಖಾಯಿಲೆಯನ್ನು ಉಂಟುಮಾಡುತ್ತದೆ. ಯಾತ್ರೆಯ ಸಂದರ್ಭದಲ್ಲಿ ನಿಂತ ನೀರಿನಲ್ಲಿ ಸ್ನಾನ ಮಾಡುವಾಗ ನೀರು ಪ್ರವೇಶಿಸದಂತೆ ಮೂಗಿನ ಕ್ಲಿಪ್‌ಗಳನ್ನು ಬಳಸಿ ಅಥವಾ ನಿಮ್ಮ ಮೂಗನ್ನು ಬಿಗಿಯಾಗಿ ಮುಚ್ಚಿ ಹಿಡಿದು ಮುನ್ನೆಚ್ಚರಿಕೆ ವಹಿಸಿ.
4. ನೀರಿನ ಸಂಪರ್ಕದ ಏಳು ದಿನಗಳ ಒಳಗೆ ಜ್ವರ, ತೀವ್ರ ತಲೆನೋವು, ವಾಕರಿಕೆ/ ವಾಂತಿ, ಕುತ್ತಿಗೆ ಬಿಗಿತ, ಗೊಂದಲ/ ಮಾನಸಿಕ ಸ್ಥಿತಿಗಳಲ್ಲಿ ಬದಲಾವಣೆಗಳು ಹಾಗೂ ವ್ಯಕ್ತಿಯ ವರ್ತನೆಯಲ್ಲಿ ಅಸ್ವಸ್ಥತೆ (behavioural disorders) ಲಕ್ಷಣಗಳು ಕಾಣಿಸಿಕೊಂಡರೆ ನಿರ್ಲಕ್ಷಿಸದೆ ತುರ್ತು ಆರೈಕೆಯನ್ನು ಪಡೆಯಲು ಹತ್ತಿರದ ಸರ್ಕಾರಿ ಆಸ್ಪತ್ರೆ/ ವೈದ್ಯರನ್ನು ಸಂಪರ್ಕಿಸಿ.

K. B. 18/11

**ಆಯುಕ್ತರು**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು**